ಜೆಎಸ್ಎಸ್ ಮಹಾವಿದ್ಯಾಪೀಠ

ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಸ್ವಾಯತ್ತ)

ಬಿ.ಎನ್. ರಸ್ತೆ, ಮೈಸೂರು – 570 025

ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

Ph: 0821-2548236 & 2548380. FAX: 0821-2548238 E-mail: jssautonomous@gmail.com Website: JSSCACS.edu.in

ದಿನಾಂಕ: 22.03.2018

ಪ್ರಕಟಣೆ ಕೃಪೆಗಾಗಿ

ಜೆಎಸ್ಎಸ್ ಕಾಲೇಜಿನಲ್ಲಿ ಹಿರಿಯ ವಿದ್ಯಾರ್ಥಿಗಳ ಸಮಾವೇಶ ಮತ್ತು ಅಭಿನಂದನೆ

ಮೈಸೂರು ನಗರದ ಬಿ. ಎನ್. ರಸ್ತೆಯ ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ 25.03.2018 ನೇ ಭಾನುವಾರ ಬೆಳಗ್ಗೆ 11 ಗಂಟೆಗೆ ಕಾಲೇಜಿನ ಸುವರ್ಣ ಮಹೋತ್ಸವ ಭವನದಲ್ಲಿ ಹಿರಿಯ ವಿದ್ಯಾರ್ಥಿಗಳ ಸಮಾವೇಶ ಹಾಗೂ ಸಾಧಕ ಹಿರಿಯ ವಿದ್ಯಾರ್ಥಿಗಳಿಗೆ ಅಭಿನಂದನೆಯನ್ನು ಹಮ್ಮಿಕೊಳ್ಳಲಾಗಿದೆ. ಜೆಎಸ್ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿಗಳಾದ ಪ್ರೊ. ಎಸ್. ಪಿ. ಮಂಜುನಾಥ್‌ರವರ ಅಧ್ಯಕ್ಷತೆಯಲ್ಲಿ ಕಾಲೇಜಿನ ಹಿರಿಯ ವಿದ್ಯಾರ್ಥಿ ಹಾಗೂ ತುಮಕೂರು ಲೋಕಸಭಾ ಸದಸ್ಯರಾದ ಶ್ರೀ ಎಸ್. ಪಿ. ಮುದ್ದಹನುಮೇಗೌಡರವರು ಸಮಾವೇಶವನ್ನು ಉದ್ಘಾಟಿಸಲಿದ್ದಾರೆ. ಮಾಜಿ ಸಚಿವರುಗಳಾದ ಶ್ರೀ ಅಡಗೂರು ಎಚ್. ವಿಶ್ವನಾಥ್, ಶ್ರೀ ಎಸ್. ಎ. ರಾಮದಾಸ್ ಹಾಗೂ ಮಾಜಿ ವಿಧಾನ ಪರಿಷತ್ ಸದಸ್ಯರಾದ ಪ್ರೊ ಕೆ. ಆರ್. ಮಲ್ಲಿಕಾರ್ಜುನಪ್ಪನವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಇದೇ ಸಂದರ್ಭದಲ್ಲಿ ಕಾಲೇಜಿನ ಹಿರಿಯ ವಿದ್ಯಾರ್ಥಿಗಳಾದ ಡಾ. ಶರತ್‌ಚಂದ್ರ ಸ್ವಾಮಿಗಳು, ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರು, ಡಾ. ಮೈಸೂರು ಎಂ. ಮಂಜುನಾಥ್, ಕೇಂದ್ರ ಸಂಗೀತ ಮತ್ತು ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರು, ಶ್ರೀ ಬಿ. ಎಸ್. ಪ್ರಶಾಂತ್, ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರು ಹಾಗೂ ಶ್ರೀ ಎಂ. ಎಸ್. ಎಸ್. ಕುಮಾರ್, ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರು, ಇವರುಗಳನ್ನು ಅಭಿನಂದಿಸಲಾಗುವುದು.

ಆದುದರಿಂದ, ಕಾಲೇಜಿನಲ್ಲಿ ಪಿಯುಸಿ, ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳಲ್ಲಿ ವಿದ್ಯಾಭ್ಯಾಸ ಮಾಡಿರುವ ಎಲ್ಲಾ ವಿದ್ಯಾರ್ಥಿಗಳು ಈ ಸಮಾರಂಭದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಲು ಕೋರಲಾಗಿದೆ.

ಪ್ರಾಂಶುಪಾಲರು

(ಪ್ರೊ. ಎಂ ಮಹದೇವಪ್ಪ)

ಗೆ

ಸಂಪಾದಕರು

– – – – – – – – – – –

ಮೈಸೂರು